4. ಸಭೆಯ ಮುಂದಿಡಲಾದ ಕಾಗದ ಪತ್ರಗಳು

I ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :-

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿ) ಅವರ ಪರವಾಗಿ :-

1951ರ ರಾಜ್ಯ ಹಣಕಾಸು ಸಂಸ್ಥೆ ಅಧಿನಿಯಮ 37 (6) ಮತ್ತು (7) ಪ್ರಕರಣದ ಮೇರೆಗೆ:-

1. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ಅಧಿನಿಯಮ 2001-02ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ

II ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು) ಪರವಾಗಿ :-

1980ರ ಕಾಡಾ ಅಧಿನಿಯಮ 25ನೇ ಕಲಂ ಮೇರೆಗೆ:-

2. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ನೀರಾವರಿ ಯೋಜನೆಗಳ ವಲಯ ಗುಲ್ಬರ್ಗಾ 2001-02ನೇ ಸಾಲಿನ ವಾರ್ಷಿಕ ವರದಿ.

3. ಭದ್ರಾ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಶಿವಮೊಗ್ಗ 2001-02ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

III ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರ ಪರವಾಗಿ :-

1993ರ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 262 (3)ನೇ ಮತ್ತು 300 (5)ನೇ ಪ್ರಕರಣದ ಮೇರೆಗೆ :-

4. ಕೊಪ್ಪಳ ಜಿಲ್ಲಾ ಪಂಚಾಯತ್‌ನ 2001-02ನೇ ಸಾಲಿನ ವಾರ್ಷಿಕ ಆಡಳಿತ ವರದಿ.

5. ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ನ 1998-99ನೇ ಸಾಲಿನ ಲೆಕ್ಕ ತಪಾಸಣಾ ವರದಿ.

6. ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ನ 2001-02ನೇ ಸಾಲಿನ ವಾರ್ಷಿಕ ಆಡಳಿತ ವರದಿ.

7. ಕೊಡಗು ಜಿಲ್ಲಾ ಪಂಚಾಯತ್‌ನ 2001-02ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

IV ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ ಸಚಿವರು) ಅವರ ಪರವಾಗಿ 1974ರ ಜಲ (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ ಕಂಡಿಕೆ 40 (7)ರ ಮೇರೆಗೆ:

8. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ 2000-01ನೇ ಸಾಲಿನ ಲೆಕ್ಕಪತ್ರ ವರದಿಯನ್ನು ಮಂಡಿಸುತ್ತಿದ್ದೇನೆ.

V ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :-

1956ರ ಕಂಪನಿ ಕಾಯ್ದೆಯ ಅಧಿನಿಯಮ 619 (ಎ) ಪ್ರಕರಣದ ಮೇರೆಗೆ:

9. ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಹದಿನಾರನೇ 2001-02ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪತ್ರಗಳನ್ನು ಮಂಡಿಸುತ್ತಿದ್ದೇನೆ.

VI ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಹಾಗೂ ಮಾಧ್ಯಮ ಕೈಗಾರಿಕಾ ಸಚಿವರು) ಅವರ ಪರವಾಗಿ:-

1956ರ ಕಂಪನಿ ಕಾಯ್ದೆಯ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:-

10. ಕರ್ನಾಟಕ ಟ್ರಸ್ಟೀ ಕಂಪನಿ ಪ್ರೈವೇಟ್ ಲಿಮಿಟೆಡ್ 1998-99 ಮತ್ತು 1999-2000ನೇ ಸಾಲಿನ ವಾರ್ಷಿಕ ವರದಿ.

11. ಕರ್ನಾಟಕ ಅಸೆಟ್ ಮ್ಯಾನೆಜ್‌ಮೆಂಟ್ ಕಂಪನಿ ಪ್ರೈವೇಟ್ ಲಿಮಿಟೆಡ್‌ನ 1998-99 ಮತ್ತು 1999-2000ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

VII ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) ಅವರ ಪರವಾಗಿ :-

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48 (5) ಮತ್ತು 49ನೇ ಪ್ರಕರಣ

12. ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ 2001-02ನೇ ಸಾಲಿನ ಲೆಕ್ಕ ತನಿಖಾ ವರದಿ.

13. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 2000-01ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ.

14. ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ 2001-02ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ.

15. ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರದ 2001-02ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ.

16. ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರದ 2001-02ನೇ ಸಾಲಿನ ಲೆಕ್ಕ ತಪಾಸಣಾ ವರದಿ.

17. ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ 2001-02ನೇ ಸಾಲಿನ ಲೆಕ್ಕ ತಪಾಸಣಾ ವರದಿ.

18. ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ 2001-02ನೇ ಸಾಲಿನ ಲೆಕ್ಕ ತನಿಖಾ ವರದಿಯನ್ನು ಮಂಡಿಸುತ್ತಿದ್ದೇನೆ.

VIII ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ರಮಾನಾಥ ರೈ (ಸಾರಿಗೆ ಸಚಿವರು) ಅವರ ಪರವಾಗಿ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕಾಯ್ದೆ 1956 ಅಧಿನಿಯಮ 33 (2) 34 (2) ಹಾಗೂ 35 (2) ರ ಪ್ರಕರಣದ ಮೇರೆಗೆ

19. ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗುಲ್ಬರ್ಗಾ 2000-01ನೇ ಸಾಲಿನ ವಾರ್ಷಿಕ ಆಡಳಿತದ ವರದಿ.

20. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ 2001-02ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ಮತ್ತು ಪರಿಶೋಧನಾ ವರದಿ.

21. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ 2001-02ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

IX ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಡಾ।। ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) ಅವರ ಪರವಾಗಿ :-

1976ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 45 (2), 47 (4)ನೇ ಪ್ರಕರಣದ ಮೇರೆಗೆ

22. ಕುವೆಂಪು ವಿಶ್ವವಿದ್ಯಾಲಯದ 2000-01ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

XX ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು) :- ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವರು) ಅವರ ಪರವಾಗಿ :-

1956ರ ಕಂಪನಿ ಕಾಯ್ದೆಯ ಅಧಿನಿಯಮ 619 (ಎ) ಪ್ರಕರಣದ ಮೇರೆಗೆ:-

23. ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್ ನಿಯಮಿತದ 2001-02ನೇ ಸಾಲಿನ 22ನೇ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:- ಮಂಡಿಸಲಾಯಿತು

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ಕರ್ನಾಟಕ ತಿದ್ದುಪಡಿ) ವಿಧೇಯಕ, 2002

ಪರ್ಯಾಲೋಚನಾ ಪ್ರಸ್ತಾವ

†ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಮಂತ್ರಿಗಳು) :- (ಮಾನ್ಯ ಶ್ರೀ ಮಲ್ಲಿಕಾರ್ಜುನ ಖರ್ಗೆ ಗೃಹ ಸಚಿವರು ಇವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2002ನೇ ಸಾಲಿನ ಅನೂಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಕೃಷ್ಣಪ್ಪ :- ಮಾನ್ಯ ಸಭಾಧ್ಯಕ್ಷರೆ, ಈಗಿರುವ ಕಾಲಂಗಳಲ್ಲಿ ಮತ್ತು ಕಾನೂನಲ್ಲಿ ಈ ವಿಶೇಷ ನ್ಯಾಯಾಲಯಗಳೆಂದೇನು ಸ್ಥಾಪನೆ ಮಾಡಿದ್ದೇವೆ, ಅವು ಆ ಮ್ಯಾಜಿಸ್ಟ್ರೇಟ್ ಕೋರ್ಟ್ ಮುಂದೆ ಹೋಗಿ ತದನಂತರ ಮತ್ತೆ ಸೆಷನ್ ಕೋರ್ಟ್‌ನಲ್ಲಿ ಡಿಲೇ ಆಗುತ್ತದೆಂದು ನೇರವಾಗಿ ಈ ಒಂದು ಸ್ಪೆಷಲ್ ಕೋರ್ಟ್‌ಗಳಿಗೆ ನೇರವಾಗಿ ಅಧಿಕಾರವನ್ನು ಕೊಟ್ಟರೆ ಬೇಗ ಬೇಗ ಇತ್ಯರ್ಥವಾಗಬಹುದೆಂದು ಈ ಒಂದು ಸಣ್ಣ ತಿದ್ದುಪಡಿಯನ್ನು ತಂದಿದ್ದೇವೆ. ಈ ಮ್ಯಾಜಿಸ್ಟ್ರೇಟ್ ಕೋರ್ಟ್ ಮತ್ತು ಸೆಷನ್ ಕೋರ್ಟ್‌ಗಳಿಗೆ ಹೋಗಿ ಪ್ರಕರಣ ಇತ್ಯರ್ಥವಾಗುವುದನ್ನು ತಪ್ಪಿಸಿ ನೇರವಾಗಿ ಸ್ಪೆಷಲ್ ಕೋರ್ಟ್‌ಗಳಿಗೆ ಅಧಿಕಾರವನ್ನು ಕೊಟ್ಟರೆ ಈ ಹರಿಜನಗಿರಿಜನರ ಮೇಲಿರುವ ದೌರ್ಜನ್ಯ ಪ್ರಕರಣಗಳನ್ನು ಬೇಗ ವಿಲೇವಾರಿ ಮಾಡಬಹುದೆಂದು ಉದ್ದೇಶವನ್ನಿಟ್ಟುಕೊಂಡು ಸರ್ಕಾರ ಈ ತಿದ್ದುಪಡಿಯನ್ನು ಈ ಸದನದ ಮುಂದೆ ತಂದಿದೆ, ಇದನ್ನು ಅಂಗೀಕಾರ ಮಾಡಬೇಕಾಗಿ ಮಾನ್ಯ ಸದಸ್ಯರಲ್ಲಿ ಪ್ರಾರ್ಥನೆ ಮಾಡುತ್ತೇನೆ.

ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) :- ಇದು ಒಂದು ಒಳ್ಳೆಯ ತಿದ್ದುಪಡಿ. ಒಪ್ಪಬಹುದು.